# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1584 (1865)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ರಾಜ್ಯದಲ್ಲಿ ಕೋವಿಡ್-19 ಸೋಂಕಿನ ವಿರುದ್ಧ ಲಸಿಕೆ ಹಂಚಿಕೆ ಕುರಿತು

(ಅ) ರಾಜ್ಯದಲ್ಲಿ ಕೋವಿಡ್-19 ಸೋಂಕಿನ ವಿರುದ್ಧ ಯಾವ ಯಾವ ಲಸಿಕೆಯನ್ನು ಸಾರ್ವಜನಿಕರ ಬಳಕೆಗೆ ಉಪಯೋಗಿಸಲಾಗುತ್ತಿದೆ; (ವಿವರ ನೀಡುವುದು)

(ಆ) ಯಾವ ಆಧಾರದಲ್ಲಿ ಲಸಿಕೆಯನ್ನು ವಿಂಗಡಿಸಿ ಸಾರ್ವಜನಿಕರಿಗೆ ನೀಡಲಾಗುತ್ತಿದೆ; (Specific Vaccine to Particular Person) (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೋವಿಡ್-19 ಸೋಂಕಿನ ವಿರುದ್ಧ ನೀಡಲಾಗುತ್ತಿರುವ ಲಸಿಕೆಯನ್ನು ಯಾವ ಮಾದರಿಯಲ್ಲಿ ಮತ್ತು ಯಾವ ಹಂತಗಳಲ್ಲಿ ಸಾರ್ವಜನಿಕರಿಗೆ ನೀಡಲು ಸರ್ಕಾರ ಚಿಂತಿಸಿದೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಹಿರಿಯ ನಾಗರೀಕರಿಗೆ ಕೋವಿಡ್-19 ಸೋಂಕಿನ ವಿರುದ್ಧ ನೀಡಲಾಗುತ್ತಿರುವ ಲಸಿಕೆಯನ್ನು ಪಡೆಯಲು ತಾಂತ್ರಿಕ ವ್ಯವಸ್ಥೆಯಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ;

(ಉ) ಸಮರ್ಪಕ ಮಾಹಿತಿಯಿಲ್ಲದೆ ಹಲವಾರು ಹಿರಿಯ ನಾಗರೀಕರು ಕೋವಿಡ್-19 ಸೋಂಕಿನ ವಿರುದ್ಧ ನೀಡಲಾಗುತ್ತಿರುವ ಲಸಿಕೆಯನ್ನು ಪಡೆಯಲು ಸಾಧ್ಯವಾಗದಿರುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; (ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ ಕೋವಿಡ್-19 ಸೋಂಕಿನ ವಿರುದ್ಧ ನೀಡಲಾಗುತ್ತಿರುವ ಲಸಿಕೆಯನ್ನು ಹಲವು ಖಾಸಗಿಯವರು ಕಾಳಸಂತೆಯಲ್ಲಿ ಮಾರಾಟ ಮಾಡಬಹುದಾದ ಸನ್ನಿವೇಶಗಳು ಉದ್ಭವಿಸದಂತೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)